All India Radio: Bangalore
National Bulletin In Kannada
17.11.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಹೊಸದಾಗಿ ಚುನಾಯಿತ ೨೪೩ ಶಾಸಕರ ಪಟ್ಟಿಯನ್ನು ರಾಜ್ಯಪಾಲರಿಗೆ ಹಸ್ತಾಂತರಿಸಿದ ಬಿಹಾರ ಮುಖ್ಯ ಚುನಾವಣಾಧಿಕಾರಿ
2. ದೆಹಲಿ ಕಾರ್ ಬಾಂಬ್ ಸ್ಫೋಟ ಪ್ರಕರಣ ; ಎನ್ಐಎ ಯಿಂದ ಮೊದಲ ಪ್ರಮುಖ ಬಂಧನ
3. ಫರಿದಾಬಾದ್‌ನಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ಉತ್ತರ ವಲಯ ಮಂಡಳಿ ಸಭೆ
4. ಯುಎಇ ನಲ್ಲಿ ಇಂದಿನಿಂದ ದುಬೈ ಏರ್‌ಶೋ -೨೦೨೫ ಆರಂಭ ; ಭಾರತೀಯ ವಾಯುಪಡೆ ಭಾಗಿ
5. ಭಾರತದ ಬಿಲ್ಲುಗಾರ ಕುಶಾಲ್ ದಲಾಲ್‌ಗೆ ಜಿಟಿ ಓಪನ್ ಆರ್ಚರಿ ಇಂಡೋರ್ ವರ್ಲ್ಡ್ ಸೀರಿಸ್ ಕಾಂಪೌಂಡ್ ವಿಭಾಗದ ಕಿರೀಟ

<><><><>

ವಿಧಾನಸಭಾ ಚುನಾವಣಾ ಫಲಿತಾಂಶ ಪ್ರಕಟವಾದ ಎರಡು ದಿನಗಳ ನಂತರ, ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ವಿನೋದ್ ಸಿಂಗ್ ಗುಂಜಿಯಾಲ್ ಅವರು ರಾಜ್ಯ ವಿಧಾನಸಭೆಗೆ ಹೊಸದಾಗಿ ಆಯ್ಕೆಯಾದ ೨೪೩ ಸದಸ್ಯರ ಪಟ್ಟಿಯನ್ನು ಪಾಟ್ನಾದ ರಾಜಭವನದಲ್ಲಿ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಅವರಿಗೆ ಹಸ್ತಾಂತರಿಸಿದ್ದಾರೆ. ಪಟ್ಟಿಯಲ್ಲಿ ಎನ್‌ಡಿಎಯ ೨೦೨, ಮಹಾಘಟಬಂಧನದ ೩೪, ಎಐಎಂಐಎಂ, ಇಂಡಿಯನ್ ಇನ್ಕ್ಲೂಸಿವ್ ಪಾರ್ಟಿ ಮತ್ತು ಬಹುಜನ ಸಮಾಜ ಪಕ್ಷದ ಶಾಸಕರು ಸೇರಿದಂತೆ ಎಲ್ಲಾ ಅಭ್ಯರ್ಥಿಗಳ ಹೆಸರುಗಳಿವೆ.

ಈ ನಡುವೆ ವಿಧಾನಸಭಾ ಚುನಾವಣೆ ಮತ್ತು ಉಪಚುನಾವಣೆಗಳ ನಂತರ ಭಾರತದ ಚುನಾವಣಾ ಆಯೋಗವು ಬಿಹಾರ, ಆರು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಿಂದ ಮಾದರಿ ನೀತಿ ಸಂಹಿತೆಯನ್ನು ತೆಗೆದುಹಾಕಿದೆ. ಈ ಕುರಿತಂತೆ ಕೇಂದ್ರ ಸರ್ಕಾರದ ಸಂಪುಟ ಕಾರ್ಯದರ್ಶಿ

ಮತ್ತು ಆಯಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ಚುನಾವಣಾ ಆಯೋಗ ಪತ್ರ ಬರೆದಿದೆ. ಬಿಹಾರ ವಿಧಾನಸಭಾ ಚುನಾವಣೆ ಮತ್ತು ೬ ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಉಪಚುನಾವಣೆಗಳ ವೇಳಾಪಟ್ಟಿಯನ್ನು ಘೋಷಿಸಿದ ನಂತರ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿತ್ತು. ನವೆಂಬರ್ ೧೧ ರಂದು ರಾಜಸ್ಥಾನ, ತೆಲಂಗಾಣ, ಒಡಿಶಾ, ಪಂಜಾಬ್, ಜಾರ್ಖಂಡ್ ಮತ್ತು ಮಿಜೋರಾಂ - ಆರು ರಾಜ್ಯಗಳು ಮತ್ತು ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶದ ಎಂಟು ಸ್ಥಾನಗಳಿಗೆ ವಿಧಾನಸಭಾ ಉಪಚುನಾವಣೆ ನಡೆದಿತ್ತು.

<><><>

ಬಿಹಾರದಲ್ಲಿ ಎನ್‌ಡಿಎ ನೇತೃತ್ವದ ನೂತನ ಸರ್ಕಾರದ ರಚನೆಗೆ ಸಂಬಂಧಿಸಿದ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿವೆ. ಹಲವು ಹಿರಿಯ ಎನ್‌ಡಿಎ ನಾಯಕರು ಮುಖ್ಯಮಂತ್ರಿಯನ್ನು ಭೇಟಿಯಾಗಿ ಮುಂದಿನ ಸರ್ಕಾರ ರಚಿಸುವ ಕುರಿತು ಚರ್ಚೆ ನಡೆಸಿದ್ದಾರೆ. ಜೆಡಿಯುನ ಹೊಸದಾಗಿ ಚುನಾಯಿತ ೮೫ ಶಾಸಕರು ಪಾಟ್ನಾದಲ್ಲಿಂದು ನಡೆಯಲಿರುವ ಜೆಡಿಯು ಶಾಸಕಾಂಗ ಪಕ್ಷದ ಸಭೆಯಲ್ಲಿ ನಿತೇಶ್ ಕುಮಾರ್ ಅವರನ್ನು ಶಾಸಕಾಂಗ ಪಕ್ಷದ ನಾಯಕರಾಗಿ ಸರ್ವಾನುಮತದಿಂದ ಆಯ್ಕೆ ಮಾಡುವ ನಿರೀಕ್ಷೆಯಿದೆ. ಬಿಜೆಪಿಯ ಶಾಸಕಾಂಗ ಪಕ್ಷದ ಸಭೆ ಕೂಡ ಇಂದು ನಡೆಯುವ ನಿರೀಕ್ಷೆಯಿದೆ. ಚುನಾಯಿತ ಎನ್‌ಡಿಎ ಪಕ್ಷಗಳು ತಮ್ಮ ಶಾಸಕಾಂಗ ಪಕ್ಷದ ನಾಯಕರನ್ನು ಪ್ರತ್ಯೇಕ ಸಭೆಗಳಲ್ಲಿ ಆಯ್ಕೆ ಮಾಡಿದ ನಂತರ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕನನ್ನು ಆಯ್ಕೆ ಮಾಡಲು ಹೊಸದಾಗಿ ಆಯ್ಕೆಯಾದ ಎಲ್ಲ ೨೦೨ ಶಾಸಕರ ಜಂಟಿ ಸಭೆಯನ್ನು ನಡೆಸಲಾಗುವುದು. ನಂತರ ಸರ್ಕಾರ ರಚಿಸುವ ಹಕ್ಕು ಮತ್ತು ಶಾಸಕ ಬೆಂಬಲ ಪತ್ರವನ್ನು ರಾಜ್ಯಪಾಲರಿಗೆ ಸಲ್ಲಿಸಲಾಗುತ್ತದೆ. ಇದಕ್ಕೂ ಮುನ್ನ ಇಂದು ಮುಖ್ಯಮಂತ್ರಿ ನಿತೇಶ್‌ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಪ್ರಸ್ತುತ ಸರ್ಕಾರದ ಸಚಿವ ಸಂಪುಟದ ಕೊನೆಯ ಸಭೆ ನಡೆಯಲಿದೆ. ಈ ವೇಳೆ ಪ್ರಸ್ತುತ ಸಚಿವ ಸಂಪುಟವನ್ನು ವಿಸರ್ಜಿಸಿ ಹೊಸ ಸರ್ಕಾರ ರಚನೆಗೆ ದಾರಿ ಮಾಡಿಕೊಡಲು ಪ್ರಸ್ತಾವನೆ ಸಲ್ಲಿಸಲಾಗುವುದು. ಹಾಗೂ ಮುಖ್ಯಮಂತ್ರಿ ನಿತೇಶ್ ಕುಮಾರ್ ರಾಜ್ಯಪಾಲರಿಗೆ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಲಿದ್ದಾರೆ.

<><><><>

ದೆಹಲಿ ಕಾರು ಸ್ಫೋಟ ಪ್ರಕರಣದಲ್ಲಿ ಕಾಶ್ಮೀರ್ ನಿವಾಸಿ ಅಮೀರ್ ರಶೀದ್ ಅಲಿ ಎಂಬಾತನನ್ನು ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ ದೆಹಲಿಯಲ್ಲಿ ಬಂಧಿಸಿದೆ. ೧೦ ಅಮಾಯಕರು ಪ್ರಾಣ ಕಳೆದುಕೊಂಡು ಸುಮಾರು ೨೫ ಜನರು ಗಾಯಗೊಳ್ಳಲು ಕಾರಣವಾದ ಆತ್ಮಾಹುತಿ ಬಾಂಬ್ ದಾಳಿಯನ್ನು ನಡೆಸಿದ ಉಮರ್ ನಬಿ ಯೊಂದಿಗೆ ಭಯೋತ್ಪಾದಕ ದಾಳಿ ನಡೆಸಲು ಅಮೀರ್ ರಶೀದ್ ಸಂಚು ರೂಪಿಸಿದ್ದ ಎಂದು ತನಿಖಾ ಸಂಸ್ಥೆ ತಿಳಿಸಿದೆ.  ದಾಳಿಯಲ್ಲಿ ಭಾಗಿಯಾಗಿರುವ ಕಾರನ್ನು ಅವರ ಹೆಸರಿನಲ್ಲಿ ನೋಂದಾಯಿಸಲಾಗಿದೆ ಎಂದು ಎನ್‌ಐಎ ತಿಳಿಸಿದೆ. ಭಯೋತ್ಪಾದನಾ ನಿಗ್ರಹ ಸಂಸ್ಥೆಯು ನಬಿಗೆ ಸೇರಿದ ಮತ್ತೊಂದು ವಾಹನವನ್ನು ಸಹ ವಶಪಡಿಸಿಕೊಂಡಿದೆ. ಪ್ರಕರಣದಲ್ಲಿ ಸಾಕ್ಷ್ಯಕ್ಕಾಗಿ ವಾಹನವನ್ನು ಪರಿಶೀಲಿಸಲಾಗುತ್ತಿದೆ. ಸ್ಫೋಟದಲ್ಲಿ ಗಾಯಗೊಂಡವರು ಸೇರಿದಂತೆ ೭೩ ಸಾಕ್ಷಿಗಳನ್ನು ಎನ್‌ಐಎ ಇಲ್ಲಿಯವರೆಗೆ ಪರಿಶೀಲಿಸಿದೆ. ತನಿಖಾ ಸಂಸ್ಥೆ, ದೆಹಲಿ ಪೊಲೀಸ್, ಜಮ್ಮು-ಕಾಶ್ಮೀರ ಪೊಲೀಸ್, ಹರಿಯಾಣ ಪೊಲೀಸ್, ಉತ್ತರಪ್ರದೇಶ ಪೊಲೀಸ್ ಮತ್ತು ವಿವಿಧ ಅಂಗ ಸಂಸ್ಥೆಗಳೊಂದಿಗೆ ನಿಕಟ ಸಮನ್ವಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ಬಾಂಬ್ ಸ್ಫೋಟದ ಹಿಂದಿನ ದೊಡ್ಡ ಪಿತೂರಿಯನ್ನು ಪತ್ತೆಹಚ್ಚಲು ಮತ್ತು ಪ್ರಕರಣದಲ್ಲಿ ಭಾಗಿಯಾಗಿರುವ ಇತರರನ್ನು ಗುರುತಿಸಲು ಸುಳಿವುಗಳನ್ನು ಅನುಸರಿಸುತ್ತಿದೆ ಎಂದು ಸಂಸ್ಥೆ ತಿಳಿಸಿದೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ, ಹರಿಯಾಣದ ಫರಿದಾಬಾದ್‌ನಲ್ಲಿ ಇಂದು ನಡೆಯಲಿರುವ ಉತ್ತರ ವಲಯ ಮಂಡಳಿಯ ೩೨ನೇ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಾದೇಶಿಕ ಮತ್ತು ರಾಷ್ಟ್ರೀಯ ವಿಷಯಗಳನ್ನು ಚರ್ಚಿಸಲು ಈ ಸಭೆ ಉತ್ತರವಲಯದ ಸದಸ್ಯ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒಟ್ಟು ಗೂಡಿಸುತ್ತದೆ. ಹರಿಯಾಣ, ಹಿಮಾಚಲಪ್ರದೇಶ, ಪಂಜಾಬ್, ರಾಜಸ್ಥಾನ್, ದೆಹಲಿ, ಜಮ್ಮು-ಕಾಶ್ಮೀರ, ಲಡಾಕ್ ಮತ್ತು ಚಂಡಿಗಢದ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಹಕಾರ ಸಂವಾದಕ್ಕೆ ಒಂದು ರಚನಾತ್ಮಕ ವೇದಿಕೆಯನ್ನು ಈ ಸಭೆ ಒದಗಿಸುತ್ತದೆ. ರಾಜ್ಯಗಳ ಪುನರ್ ವಿಂಗಡನಾ ಕಾಯ್ದೆ ೧೯೫೬ರ ಅಡಿಯಲ್ಲಿ ರಚಿಸಲಾದ ವಲಯ ಮಂಡಳಿಗಳು ಹಲವು ರಾಜ್ಯಗಳನ್ನು ಒಳಗೊಂಡ

ವಿಷಯಗಳನ್ನು ಪರಿಹರಿಸಲು ಸಲಹಾ ಸಂಸ್ಥೆಗಳಾಗಿ ಕಾರ್ಯ ನಿರ್ವಹಿಸುತ್ತವೆ. ಕಳೆದ ೧೧ ವರ್ಷಗಳಲ್ಲಿ ಇಂತಹ ೬೩ ಸಭೆಗಳನ್ನು ನಡೆಸಲಾಗಿದೆ.

<><><><>

ದುಬೈ ಏರ್ ಶೋ ೨೦೨೫ ಇಂದಿನಿಂದ ಯುನೈಟೆಡ್ ಅರಬ್ ಎಮಿರೇಟ್ಸ್ -ಯುಎಇ ಯಲ್ಲಿ ಆರಂಭವಾಗಲಿದೆ. ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ಭಾರತ ತನ್ನ ರಕ್ಷಣಾ ಸಾಮರ್ಥ್ಯವನ್ನು ಪ್ರದರ್ಶಿಸಲಿದೆ. ಭಾರತೀಯ ವಾಯುಪಡೆಯು ಸೂರ್ಯಕಿರಣ್ ಏರೋಬ್ಯಾಟಿಕ್ ತಂಡ ಮತ್ತು ಲಘು ಯುದ್ಧ ವಿಮಾನ ತೇಜಸ್‌ನೊಂದಿಗೆ ಏರ್ ಶೋನಲ್ಲಿ ಭಾಗವಹಿಸಲಿದೆ. ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಭಾರತೀಯ ನಿಯೋಗವನ್ನು ಮುನ್ನಡೆಸಲಿದ್ದಾರೆ. ಭೇಟಿಯ ಸಮಯದಲ್ಲಿ, ಸಚಿವ ಸಂಜಯ್ ಸೇಠ್ ತಮ್ಮ ಯುಎಇ ಸಚಿವರೊಂದಿಗೆ ದ್ವಿಪಕ್ಷೀಯ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಭಾರತದಲ್ಲಿ ರಕ್ಷಣಾ ತಂತ್ರಜ್ಞಾನ ಮತ್ತು ಉತ್ಪಾದನೆಯಲ್ಲಿ ಸಹಕಾರವನ್ನು ಹೆಚ್ಚಿಸಲು ಅವರು ಭಾರತ, ಯುಎಇ, ಆಸ್ಟ್ರೇಲಿಯಾ, ಅಮೆರಿಕಾ, ಬ್ರೆಜಿಲ್, ಬ್ರಿಟನ್ ಮತ್ತು ಇಟಲಿಯ ಸುಮಾರು ೫೦ ಕಂಪನಿಗಳೊಂದಿಗೆ ಕೈಗಾರಿಕಾ ದುಂಡು ಮೇಜಿನ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ದುಬೈ ಏರ್ ಶೋ ಒಂದು ದ್ವೈವಾರ್ಷಿಕ ಕಾರ್ಯಕ್ರಮವಾಗಿದ್ದು, ಪ್ರಮುಖ ಅಂತಾರಾಷ್ಟ್ರೀಯ ಏರೋಸ್ಪೇಸ್ ಕಂಪನಿಗಳು ಸೇರಿದಂತೆ ೧೫೦ ದೇಶಗಳಿಂದ ಒಂದು ಸಾವಿರಕ್ಕೂ ಹೆಚ್ಚು ಪ್ರದರ್ಶಕರು ಮತ್ತು ೧ ಲಕ್ಷ ೪೦ ಸಾವಿರಕ್ಕೂ ಹೆಚ್ಚು ಉದ್ಯಮ ವೃತ್ತಿಪರರು ಭಾಗವಹಿಸಲಿದ್ದಾರೆ.

<><><><>

೨೦೪೭ ರ ವೇಳೆಗೆ ದೇಶವನ್ನು ವಿಕಸಿತ ಭಾರತವನ್ನಾಗಿ ಮಾಡಲು ಮಾಧ್ಯಮ ಸಂಸ್ಥೆಗಳು ರಾಷ್ಟ್ರ ನಿರ್ಮಾಣದ ಭಾಗವಾಗಬೇಕೆಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ. ಹೈದರಾಬಾದ್‌ನಲ್ಲಿ ನಿನ್ನೆ ನಡೆದ ಮೊದಲ ರಾಮೋಜಿ ಉತ್ಕೃಷ್ಟತಾ ಪ್ರಶಸ್ತಿ ೨೦೨೫ರ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು. ತಪ್ಪು ಮಾಹಿತಿ ಮತ್ತು ಸಾಮಾಜಿಕ ಮಾಧ್ಯಮಗಳ ಪ್ರಾಬಲ್ಯದ ಯುಗದಲ್ಲಿ ಮಾಧ್ಯಮಗಳು ನಿಜವಾದ ವಸ್ತು ನಿಷ್ಠತೆಯನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

<><><><>

ರಾಷ್ಟ್ರ ರಾಜಧಾನಿ ಮತ್ತು ಸುತ್ತಲಿನ ಪ್ರದೇಶಗಳಲ್ಲಿ ಅಪಾಯಕಾರಿ ವಾಯುಮಾಲಿನ್ಯ ಮಟ್ಟಕ್ಕೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ಪುನಃ ವಿಚಾರಣೆಗೆ ಒಳಪಡಿಸಲಿದೆ. ಕೃಷಿ ತ್ಯಾಜ್ಯ ಸುಡುವಿಕೆ ಮತ್ತು ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗಳು ಗಾಳಿಯ ಗುಣಮಟ್ಟವನ್ನು ಗಂಭೀರ ವರ್ಗಕ್ಕೆ ತಳ್ಳಿರುವ ಹಿನ್ನೆಲೆ ಈ ವಿಚಾರಣೆ ಮಹತ್ವ ಪಡೆದಿದೆ. ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯ್ ಮತ್ತು ನ್ಯಾಯಮೂರ್ತಿಗಳಾದ ಕೆ.ವಿನೋದ್ ಚಂದ್ರನ್ ಮತ್ತು ಎನ್.ವಿ.ಅಂಜಾರಿಯಾ ಅವರನ್ನೊಳಗೊಂಡ ಪೀಠ ಈ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಿದೆ.

<><><>

ಭಾರತದ ರಾಷ್ಟ್ರೀಯ ಸುಸ್ಥಿರತೆಯ ಗುರಿಗಳು ಮತ್ತು ಪರಿಸರ ಜವಾಬ್ದಾರಿಯುತ ಉತ್ಪನ್ನಗಳಿಗೆ ಹೆಚ್ಚುತ್ತಿರುವ ಜಾಗತಿಕ ಬೇಡಿಕೆಗೆ ಅನುಗುಣವಾಗಿ, ಪ್ಲಾಸ್ಟಿಕ್ ಉದ್ಯಮ, ಶೇಕಡ ೧೦೦ರಷ್ಟು ಪ್ಲಾಸ್ಟಿಕ್ ಮರುಬಳಕೆಯನ್ನು ಖಚಿತಪಡಿಸಿಕೊಳ್ಳುವತ್ತ ನಿರ್ಣಾಯಕ ಹೆಜ್ಜೆ ಇಡಬೇಕೆಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕರೆ ನೀಡಿದ್ದಾರೆ. ಮುಂಬೈನಲ್ಲಿ ನಿನ್ನೆ ನಡೆದ ರಫ್ತು ಉತ್ಕೃಷ್ಟತಾ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಫ್ಲೆಕ್ಸ್ ಕಾನ್ಸಿಲ್‌ನ ಪ್ಲಾಟಿನಂ ಜುಬಿಲಿ ಆಚರಣೆಯನ್ನುದ್ದೇಶಿಸಿ ಅವರು ಮಾತನಾಡಿದರು.

<><><>

ಭಾರತದ ಬಿಲ್ಲುಗಾರ ಕುಶಾಲ್ ದಲಾಲ್, ಲಕ್ಸೆಂಬರ್ಗ್‌ನ ಸ್ಟ್ರಾಸೆನ್‌ನಲ್ಲಿ ನಡೆದ ಪುರುಷರ ಕಾಂಪೌಂಡ್ ವಿಭಾಗದ ಜಿಟಿ ಓಪನ್ ಇಂಡೋರ್ ವರ್ಲ್ಡ್ ಸೀರೀಸ್ ಪ್ರಶಸ್ತಿಯನ್ನು ಗೆದ್ದಿದ್ದಾರೆ. ಕುಶಾಲ್ ಡಬಲ್ ಶೂಟ್ ಆಫ್‌ನಲ್ಲಿ ಅಮೆರಿಕದ ಮಾಜಿ ವಿಶ್ವ ಅಗ್ರ ಶ್ರೇಯಾಂಕಿತ ಸ್ಟೀಫನ್ ಹ್ಯಾನ್ಸನ್ ಅವರನ್ನು ಸೋಲಿಸುವ ಮೂಲಕ ಚಿನ್ನದ ಪದಕವನ್ನು ಗೆದ್ದರು. ಇದಕ್ಕೂ ಮೊದಲು, ಸೆಮಿಫೈನಲ್‌ನಲ್ಲಿ ವಿಶ್ವ ಚಾಂಪಿಯನ್ ಫ್ರಾನ್ಸ್‌ನ ನಿಕೋಲಸ್ ಗೆರಾರ್ಡ್ ಅವರನ್ನು ಸೋಲಿಸುವ ಮೂಲಕ ಕುಶಾಲ್ ಫೈನಲ್ ತಲುಪಿದರು. ೨೧ ವರ್ಷದೊಳಗಿನವರ ಪುರುಷರ ವಿಭಾಗದಲ್ಲಿ ಭಾರತದ ಗಣೇಶ್ ಮಣಿರತ್ನಂ ತಿರುಮುರು ಕಂಚಿನ ಪದಕವನ್ನು ಗೆದ್ದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>